ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 06 ನೇ ಮಾರ್ಚ್, 2020

ಶುದ್ಧ ನೀರಿನ ಘಟಕ ನಿರ್ವಹಣೆಯಲ್ಲಿ ನಡೆದಿರುವ ಅವ್ಯವಹಾರದ ಕುರಿತು

ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

285 (311) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಾರವಾರ ಜಿಲ್ಲೆಯ ಜನತೆಯ ನೀರಿನ ಹಾಹಕಾರ ನಿಲ್ಲಿಸುವ ಸದುದ್ದೇಶದಿಂದ ಸ್ಥಾಪಿಸಲಾದ ಸಾವಿರಾರು ಶುದ್ಧ ಕುಡಿಯುವ ನೀರಿನ ಘಟಕಗಳು ನಿರ್ವಹಣೆ ಇಲ್ಲದೆ ಕೆಟ್ಟು ನಿಂತಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಕೆಟ್ಟು ನಿಂತಿರುವ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ದುರಸ್ಥಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ; ಇದರ ನಿರ್ವಹಣೆಯ ಜವಾಬ್ದಾರಿ ಯಾರದು ;

(ಇ) ಕಾರವಾರ ಜಿಲ್ಲೆಯಲ್ಲಿ ಒಟ್ಟು ಎಷ್ಟು ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸಲಾಗಿದೆ ; ಎಲ್ಲೆಲ್ಲಿ ಹಾಗೂ ಅವು ಯಾವುವು; (ವಿವರ ನೀಡುವುದು)

(ಈ) ಕಾರವಾರ ಜಿಲ್ಲೆಯಲ್ಲಿ ಎಷ್ಟು ತಾಲ್ಲೂಕು ಕೇಂದ್ರಗಳಲ್ಲಿ ನೀರು ಪರೀಕ್ಷಣಾ ಪ್ರಯೋಗಾಲಯಗಳನ್ನು Laboratory ಸ್ಥಾಪಿಸಲಾಗಿದೆ;ಈ ಪ್ರಯೋಗಾಲಯದ ಪ್ರತಿ ಕೇಂದ್ರಕ್ಕೆ ಎಷ್ಟು ಹಣ ಖರ್ಚು ಮಾಡಲಾಗಿದೆ; (ವಿವರ ನೀಡುವುದು)

(ಉ) ತಾಲ್ಲೂಕು ಕೇಂದ್ರಗಳಲ್ಲಿ ಸ್ಥಾಪಿಸಲಾದ ಪ್ರಯೋಗಾಲಯಗಳಲ್ಲಿ ಎಷ್ಟು ದುರಸ್ಥಿಯಲ್ಲಿವೆ ; ಇವುಗಳ ಸ್ಥಿತಿಗಳ ಬಗ್ಗೆ ವಿವರವಾದ ಮಾಹಿತಿಯನ್ನು ಒದಗಿಸುವುದು ?